**ದಿನಾಂಕಃ 18.03.2025 ರಂದು ಸಾಕ್ಷಿದಾರರು ಹಾಜರಿದ್ದು, ಸಾಕ್ಷಿಗೆ ಸತ್ಯ ಪ್ರತಿಜ್ಞೆ ಮಾಡಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಎಸ್.ಆರ್.ಎನ್. ವಕೀಲರಿಂದಃ–**

ನಾನು ಈ ಪ್ರಕರಣದಲ್ಲಿ ವಾದಿಯಾಗಿರುತ್ತೇನೆ. ಈ ದಿನ ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು, ಅವುಗಳನ್ನು ನಾನೇ ಹೇಳಿ ಬರೆಸಿದ್ದೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಈ ದಿನ ನಾನು ನ್ಯಾಯಾಲಯದ ಮುಂದೆ ಸಲ್ಲಿಸಿರುವ ದಾಖಲೆಗಳನ್ನು ನೋಡಿದರೆ ಗುರುತಿಸುತ್ತೇನೆ. ಅವುಗಳನ್ನು ನನ್ನ ಪರವಾಗಿ ನಿಶಾನೆಗೊಳಿಸಬೇಕೆಂದು ನಿವೇದಿಸಿಕೊಳ್ಳುತ್ತೇನೆ.

| **ಕ್ರ.ಸಂಖ್ಯೆ** | **ದಾಖಲೆಗಳ ವಿವರ** | **ನಿಶಾನೆಗಳು** |
|---|---|---|
| 1. | ದಿನಾಂಕಃ23.02.1973 ರ ನೋಂದಾಯಿತ ಕ್ರಯಪತ್ರದ ಧೃಢೀಕೃತ ಪ್ರತಿ | ನಿ.ಪಿ–1 |
| 2. | ಎರಡು ಪಹಣಿ ಪತ್ರಿಕೆಗಳು | ನಿ.ಪಿ–2 ಮತ್ತು 3 |

**ಮುಂದುವರಿದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಕಾಲಾವಕಾಶ ಕೋರಿದ್ದರಿಂದ ಅವಕಾಶ ನೀಡಿ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತ ಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹಿರಿಯೂರು.